## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೊಸದಾಗಿ ನಿರ್ಮಾಣ ಮಾಡಿರುವ ಹಾವೇರಿ ಜಿಲ್ಲಾ ಪಂಚಾಯತ್ ಕಟ್ಟಡಕ್ಕೆ ಶ್ರೀ ಕೆ.ಬಿ. ಕೋಳಿವಾಡ, ಮಾಜಿ ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ, ಬೆಂಗಳೂರು ಇವರ ಹೆಸರನ್ನು ನಾಮಕರಣ ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ತೆಗೆದುಕೊಂಡಿರುವ ನಿರ್ಣಯವನ್ನು ರದ್ದುಗೊಳಿಸುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರ ಪತ್ರ ಸಂಖ್ಯೆ: ಹಾಜಿಪ/ಪವಿ-22/ವಹಿ-22/2017-18/441, ದಿನಾಂಕ: 22-05-2017 ಹಾಗೂ 2/11/2017.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 192 ಜಿಪಸ 2017 (ಭಾ-1), ದಿನಾಂಕ:31-05-2017 ಹಾಗೂ 7-10-2017.
3. ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಕಾಹಾ:ಜಿಪಂಕಾಹಾ:ವಹಿ:2017-18, ದಿನಾಂಕ: 06-06-2018.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಪತ್ರಗಳಲ್ಲಿ, ದಿನಾಂಕ:15-05-2017 ರಂದು ನಡೆದ ಹಾವೇರಿ ಜಿಲ್ಲಾ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸತಕ್ಕಂಥ (ವಿಷಯ ಸಂಖ್ಯೆ4/15)ರಲ್ಲಿ ಜಿಲ್ಲಾ ಪಂಚಾಯತಿ ಸದಸ್ಯರಾದ ಶ್ರೀ.ಶಿವಾನಂದ ಕನ್ನಪ್ಪಳವರ ಇವರು ಪ್ರಸ್ತಾವನೆ ಸಲ್ಲಿಸಿ, ನೂತನವಾಗಿ ನಿರ್ಮಾಣವಾಗುತ್ತಿರುವ ಜಿಲ್ಲಾ ಪಂಚಾಯತಿ ಕಾರ್ಯಾಲಯಕ್ಕೆ ಶ್ರೀ ಕೆ.ಬಿ.ಕೋಳಿವಾಡ, ಅಂದಿನ ಶಾಸಕರು ಹಾಗೂ ವಿಧಾನಸಭಾಧ್ಯಕ್ಷರು ಇವರ ಹೆಸರನ್ನು ನಾಮಕರಣ ಮಾಡುವಂತೆ ಕೋರಿದ್ದು, ಸದರಿ ಪ್ರಸ್ತಾವನೆಗೆ ಎಲ್ಲಾ ಜಿಲ್ಲಾ ಪಂಚಾಯತಿ ಸದಸ್ಯರು ಸಹಮತ ವ್ಯಕ್ತಪಡಿಸಿದ್ದು, ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ನಿಯಮಗಳನುಸಾರ ಸರ್ಕಾರಿ ಕಛೇರಿ/ಕಟ್ಟಡಗಳಿಗೆ ಚುನಾಯಿತ ಜೀವಂತ ಪ್ರತಿನಿಧಿಗಳ ಹೆಸರನ್ನು ನಾಮಕರಣ ಮಾಡಲು ಅವಕಾಶವಿಲ್ಲವೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾವೇರಿ ಇವರು ಸಭೆಗೆ ಗಮನಕ್ಕೆ ತಂದಾಗ್ಯೂ ಈ ಅಂಶಗಳನ್ನು ಪರಿಗಣಿಸದೇ ಶ್ರೀ ಕೆ.ಬಿ.ಕೋಳಿವಾಡ ಇವರ ಹೆಸರನ್ನು ನಾಮಕರಣ ಮಾಡಲು ಸಭೆಯು ತೀರ್ಮಾನ ಕೈಗೊಂಡಿರುತ್ತದೆ ಹಾಗೂ ದಿನಾಂಕ:28-10-2017ರಂದು ನಡೆದ ಹಾವೇರಿ ಜಿಲ್ಲಾ ಪಂಚಾಯತ್‌ನ ಸಾಮಾನ್ಯ ಸಭೆಯಲ್ಲಿಯೂ ಸಹ ಶ್ರೀ ಕೆ.ಬಿ.ಕೋಳಿವಾಡ ಇವರ ಹೆಸರನ್ನು ಹಾವೇರಿ ಜಿಲ್ಲಾ ಪಂಚಾಯತಿ ಕಟ್ಟಡಕ್ಕೆ ನಾಮಕರಣ ಮಾಡಲು ಪುನಃ ಜಿಲ್ಲಾ ಪಂಚಾಯತಿ ಸಾಮಾನ್ಯ ಸಭೆಯು ನಿರ್ಣಯ ಕೈಗೊಂಡಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾವೇರಿ ಇವರು ಸರ್ಕಾರಕ್ಕೆ ವರದಿ ಮಾಡಿರುತ್ತಾರೆ.

ಮೇಲೆ ಓದಲಾದ(2)ರಲ್ಲಿನ ಸರ್ಕಾರಿ ಪತ್ರಗಳಲ್ಲಿ ಶ್ರೀ ಕೆ.ಬಿ.ಕೋಳಿವಾಡ ಇವರ ಹೆಸರನ್ನು ಹಾವೇರಿ ಜಿಲ್ಲಾ ಪಂಚಾಯತಿ ಕಟ್ಟಡಕ್ಕೆ ನಾಮಕರಣ ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ ಕ್ರಮ ವಹಿಸುವ ಬಗ್ಗೆ ಸರ್ಕಾರವು ತಿಳಿಸುವವರೆಗೆ ಕಾಯುವಂತೆ ತಿಳಿಸಲಾಗಿದೆ ಹಾಗೂ ಸರ್ಕಾರಿ ಕಟ್ಟಡಗಳಿಗೆ ಚುನಾಯಿತ ಪ್ರತಿನಿಧಿಗಳ ಹೆಸರನ್ನು ನಾಮಕರಣ ಮಾಡಲು ನಿಯಮಗಳಲ್ಲಿ ಅವಕಾಶ ಇರದ ಕಾರಣ ಜಿಲ್ಲಾ ಪಂಚಾಯತಿ ಹಂತದಲ್ಲಿ ಎಚ್ಚರಿಕೆಯ ನಿರ್ಣಯವನ್ನು ಕೈಗೊಳ್ಳುವಂತೆ ತಿಳಿಸಲಾಗಿದೆ.

ಮೇಲೆ ಓದಲಾದ(3)ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ, ಚುನಾಯಿತ ಜೀವಂತ ಪ್ರತಿನಿಧಿಗಳ ಹೆಸರನ್ನು ಸರ್ಕಾರಿ ಕಟ್ಟಡಗಳಿಗೆ ನಾಮಕರಣ ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಅಡಿಯಲ್ಲಿ ಅವಕಾಶವಿಲ್ಲದ ಕಾರಣ ದಿನಾಂಕ:15-05-2017 ಹಾಗೂ 28-10-2017ರಂದು ಹಾವೇರಿ ಜಿಲ್ಲಾ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಕೈಗೊಂಡ ನಿರ್ಣಯವನ್ನು ರದ್ದುಪಡಿಸುವಂತೆ ಕೋರಿದ್ದಾರೆ.

ಸದರಿ ಪ್ರಕರಣವನ್ನು ಕೂಲಂಕಷವಾಗಿ ನಿಯಮಾನುಸಾರ ಪರಿಶೀಲಿಸಿದ್ದು, ಸರ್ಕಾರಿ ಕಟ್ಟಡಗಳಿಗೆ ಚುನಾಯಿತ ಪ್ರತಿನಿಧಿಗಳ ಹೆಸರನ್ನು ನಾಮಕರಣ ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಅಡಿಯಲ್ಲಿ ಅವಕಾಶವಿಲ್ಲದಿರುವುದನ್ನು ಪರಿಗಣಿಸಿ, ಹಾವೇರಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಕೈಗೊಂಡಿರುವ ನಿರ್ಣಯವನ್ನು ರದ್ದುಪಡಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 192 ಜಿಪಸ 2017, ಬೆಂಗಳೂರು, ದಿನಾಂಕ:07-09-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೊಸದಾಗಿ ನಿರ್ಮಾಣ ಮಾಡಿರುವ ಹಾವೇರಿ ಜಿಲ್ಲಾ ಪಂಚಾಯತಿ ಕಟ್ಟಡಕ್ಕೆ ಶ್ರೀ ಕೆ.ಬಿ.ಕೋಳಿವಾಡ, ಮಾಜಿ ಶಾಸಕರು ಹಾಗೂ ಹಿಂದಿನ ಸಭಾಧ್ಯಕ್ಷರು ಕರ್ನಾಟಕ ವಿಧಾನಸಭೆ ಇವರ ಹೆಸರನ್ನು ನಾಮಕರಣ ಮಾಡಲು ಹಾವೇರಿ ಜಿಲ್ಲಾ ಪಂಚಾಯತಿಯ ದಿನಾಂಕ:15-05-2017ರ ಸಾಮಾನ್ಯ ಸಭೆಯ ನಡವಳಿ ಕ್ರಮ ಸಂಖ್ಯೆ.4/15 ಹಾಗೂ ದಿನಾಂಕ:28-10-2017ರ ಸಾಮಾನ್ಯ ಸಭೆಯ ನಡವಳಿಯ ಕ್ರಮ ಸಂಖ್ಯೆ-7ರಲ್ಲಿ ಕೈಗೊಂಡಿರುವ ನಿರ್ಣಯಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರಲ್ಲಿ ಅವಕಾಶವಿಲ್ಲದಿರುವುದನ್ನು ಪರಿಗಣಿಸಿ, ಸದರಿ ನಿರ್ಣಯಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸಲು ಕೋರಿದೆ.

**<u>ಇವರಿಗೆ:</u>**

1) ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಹಾವೇರಿ.
2) ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
4) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ ಇವರ ಮಾಹಿತಿಗಾಗಿ ಹಾಗೂ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರುವಂತೆ ಕೋರಿದೆ.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ಕಾರ್ಯದರ್ಶಿಗಳ ಆಪ್ತ ಸಹಾಯಕರು, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
7) ಮುಖ್ಯಸ್ಥರು, ಗಣಕಕೋಶ, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಸದರಿ ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
8) ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.